# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 597

ಮಾನ್ಯ ಸದಸ್ಯರ ಹೆಸರು : ಶ್ರೀ. ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 09.03.2026

ಉತ್ತರಿಸಬೇಕಾದ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ರಾಜ್ಯದಲ್ಲಿ ಅಂಗವಿಕಲರಿಗೆ ನೀಡುವ ಪಿಂಚಣಿ ಹಣಕ್ಕಾಗಿ ನಕಲಿ ಅಂಗವಿಕಲ ಪ್ರಮಾಣ ಪತ್ರಗಳನ್ನು ಆರೋಗ್ಯ ಇಲಾಖೆಯಲ್ಲಿನ ವೈದ್ಯರುಗಳು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಅವರುಗಳ ಮೇಲೆ ಸರ್ಕಾರ ಕೈಗೊಂಡ ಕಾನೂನು ಕ್ರಮಗಳೇನು:</td><td rowspan="3">ರಾಜ್ಯದಲ್ಲಿ ಪಿಂಚಣಿ ಹಣಕ್ಕಾಗಿ ನಕಲಿ ಅಂಗವಿಕಲ ಪ್ರಮಾಣ ಪತ್ರಗಳನ್ನು ಆರೋಗ್ಯ ಇಲಾಖೆಯಲ್ಲಿನ ವೈದ್ಯರುಗಳಿಂದ ಪಡೆಯುತ್ತಿರುವ ಬಗ್ಗೆ, ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನಲ್ಲಿ ದೂರು ಬಂದಿದ್ದು, ಈ ಬಗ್ಗೆ ಕಂದಾಯ ಇಲಾಖೆಯಿಂದ ತನಿಖೆಯಾಗುತ್ತಿದ್ದು, ತನಿಖಾ ವರದಿ ಸ್ವೀಕೃತವಾದ ಮೇಲೆ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಕೊಳ್ಳಲಾಗುವುದು.</td></tr>
<tr><td>ಆ.</td><td>ಕಳೆದ ಐದು ವರ್ಷಗಳಲ್ಲಿ ಅನರ್ಹರಿಗೆ ಅಂಗವಿಕಲ ಪ್ರಮಾಣ ಪತ್ರಗಳನ್ನು ನೀಡಿರುವ ಪ್ರಕರಣಗಳು ಎಷ್ಟು; ಅವರುಗಳ ಮೇಲೆ ಕಾನೂನು ಕ್ರಮ ಕೈಗೊಂಡ ಪ್ರಕರಣಗಳೆಷ್ಟು; (ಸಂಪೂರ್ಣ ಆದೇಶ ಪ್ರತಿಗಳೊಂದಿಗೆ ವಿವರಗಳನ್ನು ಒದಗಿಸುವುದು)</td></tr>
<tr><td>ಇ.</td><td>ವಿಜಯಪುರ ಜಿಲ್ಲೆ, ಇಂಡಿ ತಾಲ್ಲೂಕಿನಲ್ಲಿ ಅಕ್ರಮವಾಗಿ / ಅನುಮಾನಾಸ್ಪದವಾಗಿ ಅಂಗವಿಕಲ ಪ್ರಮಾಣ ಪತ್ರಗಳನ್ನು ಪಡೆದು ಪಿಂಚಣಿ ಪಡೆಯುತ್ತಿರುವ ಪ್ರಕರಣ ಕಂಡು ಬಂದಿದ್ದು, ಇದಕ್ಕೆ ಕಂದಾಯ ಇಲಾಖೆ ವತಿಯಿಂದ ತನಿಖೆ ನಡೆಸಲಾಗುತ್ತಿದೆಯೇ: ನಕಲಿ ಅಂಗವಿಕಲರುಗಳಿಗೆ ಪ್ರಮಾಣ ಪತ್ರ ನೀಡಿರುವವರುಗಳ ಮೇಲೆ ತನಿಖೆ ನಡೆಸಿ ಕಾನೂನಿನ ಕಠಿಣ ಕ್ರಮ ಕೈಗೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?</td></tr>
</table>

**HFW 08 HSD 2026**

( ದಿನೇಶ್ ಗುಂಡೂರಾವ್ )
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.